ಚುಟುಕು ಸುದ್ದಿ

ಮನಿ ಲಾಂಡ್ರಿಂಗ್ ಹೆಸರಿನಲ್ಲಿ ವೃದ್ಧೆಗೆ 1.24 ಕೋ. ವಂಚನೆ

ಬೆಂಗಳೂರು: ವಂಚಕರು ವೃದ್ಧೆಗೆ ಮನಿ ಲಾಂಡ್ರಿಂಗ್ ಆರೋಪದಡಿ ಸಿಬಿಐನಲ್ಲಿ ಪ್ರಕರಣ ದಾಖಲಾಗಿರುವುದಾಗಿ ಹೆದರಿಸಿ 1.24 ಕೋಟಿ ರೂ. ವಂಚಿಸಿದ್ದು ಈ ಸಂಬಂಧ ವೃದ್ಧೆ ಸೈಬರ್ ಅಪರಾಧ ಠಾಣೆಗೆ ದೂರು ನೀಡಿದ್ದಾರೆ.

ಅಪರಾಧ ಸುದ್ದಿ

ದೂರುದಾರರಿಗೆ ಅಕ್ಟೋಬರ್‌ನಲ್ಲಿ ಕರೆ ಮಾಡಿದ್ದ ವಂಚಕರು, ಮುಂಬೈ ಪೊಲೀಸರ ಸೋಗಿನಲ್ಲಿ ಮಾತನಾಡಿ, ನಿಮ್ಮ ಹೆಸರಿನಲ್ಲಿ ಇನ್ನೊಂದು ನಂಬರ್‌ನಲ್ಲಿ ಕಾನೂನುಬಾಹಿರ ಚಟುವಟಿಕೆಗಳು ಹಾಗೂ ಮನಿ ಲಾಂಡ್ರಿಂಗ್ ಮಾಡಲಾಗುತ್ತಿದೆ.

ಸಿಬಿಐನ ಅಧಿಕಾರಿಗಳು ನಿಮ್ಮನ್ನು ಸಂಪರ್ಕಿಸಲಿದ್ದಾರೆಂದು ಬೆದರಿಸಿದ್ದಾರೆ. ಬಳಿಕ ಸಿಬಿಐ ಅಧಿಕಾರಿಗಳ ಸೋಗಿನಲ್ಲಿ ಕರೆ ಮಾಡಿದ್ದ ವಂಚಕರು, ನಿಮ್ಮ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ನಿಮ್ಮ ಬ್ಯಾಂಕ್ ಖಾತೆಯ ಪರಿಶೀಲನೆ ಮಾಡಬೇಕಿದೆ. ನಾವು ಕೇಳಿದ ವಿವರಗಳನ್ನು ನೀಡಬೇಕು ಎಂದಿದ್ದಾರೆ. ಅದರಂತೆ ದೂರುದಾರರ ಬ್ಯಾಂಕ್ ಖಾತೆ ಸೇರಿದಂತೆ ಮತ್ತಿತರ ವಿವರಗಳನ್ನು ಪಡೆದು, ತನಿಖಾ ಪ್ರಕ್ರಿಯೆಯ ಹೆಸರಿನಲ್ಲಿ ವಾಪಸ್ ವರ್ಗಾವಣೆ ಮಾಡುವುದಾಗಿ ಹಂತ ಹಂತವಾಗಿ 1.24 ಕೋಟಿ ಹಣ ವರ್ಗಾಯಿಸಿಕೊಂಡಿದ್ದಾರೆ. ಎರಡು ತಿಂಗಳುಗಳಾದರೂ ಮತ್ತೆ ತನ್ನನ್ನು ಯಾರೂ ಸಂಪರ್ಕಿಸದ ಹಿನ್ನೆಲೆಯಲ್ಲಿ ಅನುಮಾನಗೊಂಡು ಪರಿಶೀಲಿಸಿದಾಗ ದೂರುದಾರರಿಗೆ ತಾವು ವಂಚನೆಗೊಳಗಾಗಿರುವುದು ತಿಳಿದಿದೆ. ವಂಚನೆಗೊಳಗಾದ ವೃದ್ಧೆ ನೀಡಿದ ದೂರಿನನ್ವಯ ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕೌಶಲ್ಯಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನ

ರಾಮನಗರ: ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ/ಆತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲು ಅರ್ಜಿ ಆಹ್ವಾನಿಸಲಾಗಿದೆ.

ಪ್ರವಾಸೋದ್ಯಮ ಇಲಾಖೆ ವತಿಯಿಂದ 2024–25ನೇ ಸಾಲಿನಲ್ಲಿ ಪ್ರವಾಸೋದ್ಯಮ/ಆತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೈತಿ ಕಾರ್ಯಕ್ರಮವನ್ನು ಪರಿಶಿಷ್ಟ ಜಾತಿಗೆ ಸೇರಿದ 292 ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ 162 ಅಭ್ಯರ್ಥಿಗಳಿಗೆ ರಾಜ್ಯ ಮಟ್ಟದಲ್ಲಿ ರಾಜ್ಯ ಹಾಗೂ ಕೇಂದ್ರ ಆತಿಥ್ಯ ಕ್ಷೇತ್ರದ ಸಂಸ್ಥೆಗಳಾದ ಮೈಸೂರಿನ ಫುಡ್ ಕ್ರಾಫ್ಟ್ ಇನ್ಸ್ಟಿಟ್ಯೂಟ್ (ಎಫ್‌ಸಿಐ) ಹಾಗೂ ಬೆಂಗಳೂರಿನ ಇನ್ಸ್ಟಿಟ್ಯೂಟ್ ಆಫ್ ಹೋಟೆಲ್ ಮ್ಯಾನೇಜ್ಮೆಂಟ್ ಮೂಲಕ ವಸತಿಸಹಿತ ಕಾರ್ಯಕ್ರಮವನ್ನು ಜಾರಿಗೊಳಿಸಲು ಉದ್ದೇಶಿಸಲಾಗಿದೆ.

ಅರ್ಜಿಯನ್ನು ಡಿ. 18 ರಿಂದ 24ರ ಸಂಜೆ 5.30ರ ವರೆಗೆ ಜಿಲ್ಲಾ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪಡೆದು ಡಿ. 26 ರಿಂದ 30ರ ಸಂಜೆ 5.30ರೊಳಗೆ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗೆ 9535167637ಗೆ ಸಂಪರ್ಕಿಸುವಂತೆ ಜಿಲ್ಲಾ ಪ್ರವಾಸೋದ್ಯಮ ಇಲಾಖೆ ನಿರ್ದೇಶಕರು ತಿಳಿಸಿದ್ದಾರೆ.

ಕೃಷಿಯಿಂದ ಯುವಕರು ವಿಮುಖ: ವಾಸುದೇವಪ್ಪ

ಬೆಂಗಳೂರು: ಕೃಷಿ ವಲಯದಿಂದ ಸಾಕಷ್ಟು ಮಂದಿ ವಿಮುಖರಾಗುತ್ತಿದ್ದು, ಇನ್ನಾದರೂ ಯುವಕರನ್ನು ಕೃಷಿ ಕ್ಷೇತ್ರಕ್ಕೆ ಸೆಳೆಯಲೇಬೇಕಾದ ಅನಿವಾರ್ಯತೆ ಇದೆ ಎಂದು ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಡಾ.ಸಿ.ವಾಸುದೇವಪ್ಪ ತಿಳಿಸಿದರು.

ನಗರದ ಕೃಷಿ ತಂತ್ರಜ್ಞರ ಸಂಸ್ಥೆ ವತಿಯಿಂದ ಆಯೋಜಿಸಲಾಗಿದ್ದ 56ನೇ ಸಂಸ್ಥಾಪನಾ ದಿನಾಚರಣೆ ಹಾಗೂ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ನಗರೀಕರಣ ಹೆಚ್ಚಾದ ಪರಿಣಾಮವಾಗಿ ಕೃಷಿ ಭೂಮಿ ಕೂಡ ಗಣನೀಯವಾಗಿ ಕಡಿಮೆಯಾಗುತ್ತಿದೆ. ಮುಂದಿನ ದಿನಗಳಲ್ಲಿ ಸುಸ್ಥಿರ ಅಭಿವೃದ್ಧಿಗೆ ಪೂರಕವಾದ ತಂತ್ರಜ್ಞಾನವನ್ನು ಇಂದಿನ ಕೃಷಿ ಪದ್ಧತಿಯಲ್ಲಿ ಅಳವಡಿಸಿಕೊಂಡು ಕೃಷಿ ವಲಯದತ್ತ ಯುವ ಜನಾಂಗ ಬರುವಂತೆ ಮಾಡಬೇಕಾಗಿದೆ ಎಂದು ಹೇಳಿದರು.

ಭಾರತದ ಕೃಷಿ ಕ್ಷೇತ್ರ ಇನ್ನಷ್ಟು ಬೆಳವಣಿಗೆ ಸಾಧಿಸಲು ಹಲವಾರು ಕಾರ್ಯಯೋಜನೆಗಳು ಅತ್ಯವಶ್ಯಕವಾಗಿದೆ. ಸ್ಮಾರ್ಟ್ ಅಗ್ರಿಕಲ್ಚರ್ ಅಡಿಯಲ್ಲಿ ಬರುವ ಡಿಜಿಟಲ್ ಕೃಷಿ, ಕೃತಕ ಬುದ್ಧಿಯನ್ನು

> ಇಂದಿನ ಸಾಕಷ್ಟು ಶಾಲಾ ಮಕ್ಕಳು ಕೃಷಿ ಬಗ್ಗೆ ತಿಳಿದುಕೊಳ್ಳಲು ಸಾಧ್ಯವಾಗುತ್ತಿಲ್ಲ. ಹಾಗಾಗಿ ಕೃಷಿ ಮತ್ತು ಆಹಾರ ಪದ್ಧತಿ ಕುರಿತಾಗಿ ಪಠ್ಯದಲ್ಲಿ ಅಳವಡಿಸಲು ರಾಜ್ಯ ಸರ್ಕಾರ ಮುಂದಾಗಬೇಕು.
>
> ▪ ಸಿ.ಎನ್.ನಂದಿನಿ ಕುಮಾರಿ | ಕೃಷಿ ತಂತ್ರಜ್ಞರ ಸಂಸ್ಥೆ ಅಧ್ಯಕ್ಷೆ

ವ್ಯವಸಾಯ ಚಟುವಟಿಕೆಗಳಲ್ಲಿ ಹೆಚ್ಚು ಬಳಸಿಕೊಂಡಲ್ಲಿ ಕೃಷಿ ವಲಯದಲ್ಲಿ ಇನ್ನಷ್ಟು ಪ್ರಗತಿ ಸಾಧಿಸಬಹುದಾಗಿದೆ. ಕೃಷಿ ಉತ್ಪಾದಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಮಾರುಕಟ್ಟೆಗಳಲ್ಲಿ ಡಿಜಟಲೀಕರಣ ಅವಶ್ಯಕವಾಗಿದೆ. ರೈತರಿಗೆ ಕೃಷಿಗೆ ಸಂಬಂಧಿಸಿದ ಮಾಹಿತಿಗಳನ್ನು ರೈತನಿಗೆ ತಲುಪುವಂತಾಗಬೇಕಾದ ಅಗತ್ಯತೆ ಕೂಡ ಇದೆ ಎಂದರು.

ಸಂಸ್ಥೆ ಎಂ.ಮಹಾಂತೇಶಪ್ಪ, ಎಲ್.ಐ.ರೂಡಗಿ ಇದ್ದರು. ಕೃಷಿ ತಂತ್ರಜ್ಞರ ಸಂಸ್ಥೆಯಲ್ಲಿ ಪ್ರಸ್ತುತ ಒಟ್ಟು 6,508 ಸದಸ್ಯರಿದ್ದಾರೆ. ಇವರಲ್ಲಿ 65 ವರ್ಷ ಮೇಲ್ಪಟ್ಟ ಒಟ್ಟು 74 ಮಂದಿಗೆ ಸನ್ಮಾನಿಸಲಾಯಿತು.

ಎಚ್‌ಎಸ್‌ಆರ್‌ಪಿ: ಸದ್ಯಕ್ಕೆ ದಂಡ ವಿಧಿಸದಂತೆ ಹೈಕೋರ್ಟ್‌ ಸೂಚನೆ

ಬೆಂಗಳೂರು: ಅತಿ ಭದ್ರತೆ ನೋಂದಣಿ ಫಲಕ (ಎಚ್‌ಎಸ್‌ಆರ್‌ಪಿ) ಅಳವಡಿಸದ ವಾಹನಗಳಿಗೆ ಮುಂದಿನ ಆದೇಶದವರೆಗೆ ದಂಡ ವಿಧಿಸುವಂತಿಲ್ಲ ಎಂದು ಹೈಕೋರ್ಟ್ ಸಾರಿಗೆ ಇಲಾಖೆಗೆ ಸೂಚಿಸಿದೆ.

ಸಾರಿಗೆ ಇಲಾಖೆ ಡಿ.31ರವರೆಗೆ ಎಚ್‌ಎಸ್‌ಆರ್‌ಪಿ ಅಳವಡಿಕೆಗೆ ಗಡುವು ನೀಡಿದೆ. ನಂತರ ಜ.1ರಿಂದ ದಂಡ ವಿಧಿಸುವುದಾಗಿ ಪ್ರಕಟಿಸಿತ್ತು. ಈ ಹಿನ್ನೆಲೆಯಲ್ಲಿ ಹೈಕೋರ್ಟ್ ಸೂಚನೆ ನೀಡಿ ಮುಂದಿನ ಆದೇಶದವರೆಗೆ ಯಾವುದೇ ದಂಡ ವಿಧಿಸದಂತೆ ತಿಳಿಸಿದೆ.

ಕೇಂದ್ರ ಸರ್ಕಾರದ ಸೂಚನೆಯಂತೆ ರಾಜ್ಯ ಸರ್ಕಾರ 2019ರ ಏಪ್ರಿಲ್ 1ಕ್ಕಿಂತ ಮೊದಲು ಖರೀದಿಸಿದ ಎಲ್ಲ ವಾಹನಗಳಿಗೆ ಎಚ್‌ಎಸ್‌ಆರ್‌ಪಿ ಅಳವಡಿಸುವಂತೆ ಸೂಚಿಸಿತ್ತು. ಅಲ್ಲದೆ ಹಲವು ಬಾರಿ ಗಡುವನ್ನು ವಿಸ್ತರಿಸುತ್ತಾ ಬಂದಿದೆ. ಸಾರಿಗೆ ಇಲಾಖೆ ಪ್ರಕಾರ ರಾಜ್ಯದಲ್ಲಿ 2019ರ ಏಪ್ರಿಲ್ 1ಕ್ಕಿಂತ ಮೊದಲು ನೋಂದಣಿಯಾಗಿರುವ 2 ಕೋಟಿಗೂ ಅಧಿಕ ವಾಹನಗಳು ಇವೆ. ಇವುಗಳಲ್ಲಿ ಇನ್ನೂ 1.44 ಕೋಟಿ ಹಳೆಯ ವಾಹನಗಳು ಎಚ್‌ಎಸ್‌ಆರ್‌ಪಿ ಅಳವಡಿಕೆ ಮಾಡಿಕೊಳ್ಳಬೇಕಿದೆ. ಸಾರಿಗೆ ಇಲಾಖೆ ಅಧಿಕಾರಿಗಳು ಹಲವು ಬಾರಿ ಮನವಿ ಮಾಡಿಕೊಂಡಿದ್ದರೂ ಮಾಲೀಕರು ನಾಮಫಲಕ ಅಳವಡಿಸಿಕೊಳ್ಳಲು ಮುಂದೆಬರುತ್ತಿಲ್ಲ. ಹೀಗಾಗಿ ಸಾರಿಗೆ ಇಲಾಖೆಯು ತಾಲೂಕು ಹಾಗೂ ಜಿಲ್ಲಾಮಟ್ಟದಲ್ಲಿ ಅರಿವು ಮೂಡಿಸಲು ಶಿಬಿರಗಳನ್ನು ಆಯೋಜಿಸಲು ಮುಂದಾಗಿದೆ ಎಂದು ತಿಳಿದುಬಂದಿದೆ.

ಸ್ಕಾಲರ್‌ಶಿಪ್ ಅರ್ಜಿ ವಿಸ್ತರಣೆಗೆ ಆದೇಶ

ಬೆಂಗಳೂರು: ಸ್ಕಾಲರ್‌ಶಿಪ್‌ನಿಂದ ಒಬಿಸಿ ಎಂಬಿಬಿಎಸ್ ವಿದ್ಯಾರ್ಥಿಗಳನ್ನು ಹೊರಗಿಟ್ಟು ತಾರತಮ್ಯ ಮಾಡಿದ ಸರಕಾರಕ್ಕೆ ಹೈಕೋರ್ಟ್ ಚಾಟಿ ಬೀಸಿದ್ದು, ನ್ಯಾ.ಹೇಮಂತ್ ಚಂದನಗೌಡರ್ ಏಕಸದಸ್ಯ ಪೀಠದಿಂದ ಮಹತ್ವದ ಆದೇಶ ಹೊರಬಿದ್ದಿದೆ. ಅಪ್ಲಿಕೇಶನ್ ಸಲ್ಲಿಸಲು ಡಿ.20ಕ್ಕೆ ನಿಗದಿಯಾಗಿದ್ದ ಡೆಡ್‌ಲೈನ್ ವಿಸ್ತರಣೆಗೆ ಸರಕಾರಕ್ಕೆ ಆದೇಶ ನೀಡಿತು. 2024–25ರ ಸಾಲಿನ ಸ್ಕಾಲರ್‌ಶಿಪ್ ಪಡೆಯಲು ಹಿಂದಿನ ಪರೀಕ್ಷೆಯ ಫಲಿತಾಂಶ ಅಗತ್ಯವಾಗಿದ್ದು, ಕೇವಲ ಎಸ್ಸಿ/ಎಸ್ಟಿ ವಿದ್ಯಾರ್ಥಿಗಳಿಗೆ ಮಾತ್ರ ಅಪ್ಲಿಕೇಶನ್ ಡೆಡ್‌ಲೈನ್ ವಿಸ್ತರಣೆ ಮಾಡಲಾಗಿತ್ತು. ಇದರಿಂದ ಉಳಿದ ಒಬಿಸಿ ವಿದ್ಯಾರ್ಥಿಗಳ ಅರ್ಜಿ ಹಾಕಲು ಸಾಧ್ಯವಾಗಿರಲಿಲ್ಲ. ಮಯೂರ್ ಮತ್ತಿತರರು ಅರ್ಜಿ ಸಲ್ಲಿಸಿದ್ದರು.

ವಿಮಾನ ನಿಲ್ದಾಣಕ್ಕೆ ಮತ್ತೆರಡು ಪ್ರಶಸ್ತಿಗಳು

ಬೆಂಗಳೂರು: ನಗರದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು ಮತ್ತೆರಡು ಪ್ರತಿಷ್ಠಿತ ಪ್ರಶಸ್ತಿಗಳಿಗೆ ಭಾಜನವಾಗುವ ಮೂಲಕ ವಿಶೇಷ ಮನ್ನಣೆಗಳಿಸಿಕೊಂಡಿದೆ.

ಟ್ರಾವೆಲ್ ಹಾಗೂ ಲೀಶರ್ ಇಂಡಿಯಾ ನೀಡುವ ಪ್ರತಿಷ್ಠಿತ ಪ್ರಶಸ್ತಿಯಾದ 'ಅತ್ಯುತ್ತಮ ದೇಶೀಯ ಏರ್‌ಪೋರ್ಟ್ ಲಾಂಜ್' ಮನ್ನಣೆಯನ್ನು ಬೆಂಗಳೂರು ಏರ್‌ಪೋರ್ಟ್ ಟರ್ಮಿನಲ್ 2ನಲ್ಲಿ ದೇಶೀಯ ನಿರ್ಗಮನ ಪ್ರದೇಶದಲ್ಲಿರುವ 080 ಲಾಂಜ್ ಪಡೆದುಕೊಂಡಿದೆ.

ಹಾಗೆಯೇ ಕಾಂಡೆ ನಾಸ್ಟ್ ರೀಡರ್ಸ್ ಚಾಯ್ಸ್ ಅವಾರ್ಡ್ಸ್–2024ನಲ್ಲಿ ಟರ್ಮಿನಲ್ 2ನಲ್ಲಿನ ಅಂತಾರಾಷ್ಟ್ರೀಯ ನಿರ್ಗಮನ ಪ್ರದೇಶದಲ್ಲಿರುವ 080 ಲಾಂಜ್‌ಗೆ 'ಮೆಚ್ಚಿನ ವಿಮಾನ ನಿಲ್ದಾಣ ಲಾಂಜ್' ಎಂಬ ಶೀರ್ಷಿಕೆಯ ಮನ್ನಣೆಯನ್ನು ನೀಡಲಾಗಿದೆ.

ಈ ಮೂಲಕ ವಿಮಾನ ಪ್ರಯಾಣಿಕರಿಗೆ ವಿಶ್ವದರ್ಜೆಯ ಪ್ರಯಾಣದ ಅನುಭವ, ಸೌಕರ್ಯ, ಸೌಲಭ್ಯ ಮತ್ತು ಅಸಾಧಾರಣ ಸೇವೆ ನೀಡುತ್ತಿರುವ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಬದ್ಧತೆಯನ್ನು ಲೀಶರ್ ಇಂಡಿಯಾ ಎತ್ತಿಹಿಡಿದೆ. ಈ ಪುರಸ್ಕಾರಗಳು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ 080 ಲಾಂಜ್ ಬಗ್ಗೆ ಪ್ರಯಾಣಿಕರು ವಿಶೇಷ ನಂಬಿಕೆ ಮತ್ತು ಮೆಚ್ಚುಗೆಗೆ ಪಾತ್ರವಾಗಿದೆ.

ಡೇರಿ ಸಂಘದ ನೂತನ ಅಧ್ಯಕ್ಷ, ಉಪಾಧ್ಯಕ್ಷರಿಗೆ ಅಭಿನಂದನೆ

ಸಂ.ಕ. ಸಮಾಚಾರ, ಚನ್ನಪಟ್ಟಣ

ತಾಲ್ಲೂಕಿನ ಕೋಲೂರು ಗಾಂಧಿಗ್ರಾಮ ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಕೆ.ಎಂ. ವೆಂಕಟೇಶ್ ಹಾಗೂ ಉಪಾಧ್ಯಕ್ಷರಾಗಿ ಕೆ.ಪಿ. ಶಿವರಾಮು ಅವಿರೋಧವಾಗಿ ಆಯ್ಕೆಯಾದರು.

ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳ ಆಯ್ಕೆಗಾಗಿ ಸಂಘದ ಕಚೇರಿಯಲ್ಲಿ ನಡೆದ ಚುನಾವಣೆಯಲ್ಲಿ ಈ ಇಬ್ಬರ ಹೊರತಾಗಿ ಬೇರೆಯವರು ಉಮೇದುವಾರಿಕೆ ಸಲ್ಲಿಸದ ಕಾರಣ ಚುನಾವಣಾಧಿಕಾರಿ ಎಸ್.ಪುರುಷೋತ್ತಮ ಅವಿರೋಧ ಆಯ್ಕೆಯನ್ನು ಘೋಷಿಸಿದರು.

ಸಂಘದ ನೂತನ ನಿರ್ದೇಶಕರಾದ ಮೋಹನ್ ಕುಮಾರ್, ನಾರಾಯಣ.ಕೆ.ಪಿ, ಕೆ.ಎಂ.ಬೋಜರಾಜು, ಪ್ರದೀಪ್.ಕೆ.ವಿ, ಚಿಕ್ಕರಾಮು, ಕೆ.ಆರ್.ಲತಾ, ಸುವರ್ಣ ಹಾಗೂ ಮಂಗಳಮ್ಮ ಚುನಾವಣೆ ಪ್ರಕ್ರಿಯೆಯಲ್ಲಿ ಪಾಲ್ಗೊಂಡಿದ್ದರು.

ಡೇರಿ ಸಿಬ್ಬಂದಿ ಸಚಿನ್ ಹಾಗೂ ಕೃಷ್ಣ ಸುಗಮ ಚುನಾವಣೆಗೆ ನೆರವಾದರು.

ಗ್ರಾಮದ ಮುಖಂಡರಾದ ಮುಖಂಡರಾದ ಮರಿಸ್ವಾಮಿಗೌಡ, ಕೆ.ಎಸ್.ಶಿವಪ್ರಕಾಶ್, ಹೇಮಣ್ಣ, ರಾಮಕೃಷ್ಣ, ನಾರಾಯಣ ಗೌಡ, ದಾಸಪ್ಪ, ಎಳವೇಗೌಡ, ಎಂ.ಕೃಷ್ಣೇಗೌಡ, ಸುರೇಶ್, ಮುದಗೆರೆ ಸೊಸೈಟಿ ನಿರ್ದೇಶಕ ಕೆ.ಪಿ.ಲೋಕೇಶ್, ಮುದಗೆರೆ ಗ್ರಾಪಂ ಅಧ್ಯಕ್ಷ ಮಹದೇವಯ್ಯ, ಉಪಾಧ್ಯಕ್ಷೆ ನೀಲಮ್ಮ ಹಾಗೂ ಗ್ರಾಮದ ಪ್ರಮುಖರು, ಗ್ರಾಮಸ್ಥರು ಡೇರಿಯ ನೂತನ ಅಧ್ಯಕ್ಷ ಹಾಗೂ ಉಪಾಧ್ಯಕ್ಷರನ್ನು ಅಭಿನಂದಿಸಿದರು.

ಕಾಡಾನೆಗಳು ಗ್ರಾಮಕ್ಕೆ ಲಗ್ಗೆ: ಗ್ರಾಮಸ್ಥರಲ್ಲಿ ತೀವ್ರ ಆತಂಕ

ಸಂ.ಕ. ಸಮಾಚಾರ, ಕನಕಪುರ

ಕಾಡಂಚಿನ ಪ್ರದೇಶದಲ್ಲಿ ಅರಣ್ಯ ಇಲಾಖೆ ತಡೆಗೊಡೆಗಾಗಿ ನಿರ್ಮಿಸಿರುವ ರೈಲ್ವೆ ಕಂಬಿಗಳು ಮುರಿದುಬಿದ್ದು ಕಾಡಾನೆಗಳು ಗ್ರಾಮಕ್ಕೆ ನುಗ್ಗುತ್ತಿರುವುದರಿಂದ ಗ್ರಾಮಸ್ಥರಲ್ಲಿ ತೀವ್ರ ಆತಂಕ ಸೃಷ್ಟಿಯಾಗಿದೆ ಎಂದು ಗ್ರಾಮಸ್ಥರು ಆರೋಪಿಸಿದರು.

ಬುಧವಾರ ನಾರಾಯಣಪುರ ಗ್ರಾಮ ಪಂಚಾಯಿತಿ ಆವರಣದಲ್ಲಿ ಜರುಗಿದ ಗ್ರಾಮಸಭೆಯಲ್ಲಿ ನಾರಾಯಣಪುರ ಗ್ರಾಮದ ಚಿಕ್ಕಪುಟ್ಟೇಗೌಡ, ರಾಮಚಂದ್ರಯ್ಯ, ವೀರಭದ್ರಶೆಟ್ಟಿ ನಾಗರಾಜು ಅವರುಗಳು ಮಾತನಾಡಿ, ಬನ್ನೇರುಘಟ್ಟ ಅರಣ್ಯ ವನ್ಯ ಜೀವಿ ವಿಭಾಗದ ನಾರಾಯಣಪುರ ಗ್ರಾಮದ ಇಟ್ಟಿಗೆ ಗೂಡಿನಿಂದ ಕೆಬ್ಬಳ್ಳಿ ಗ್ರಾಮದ ಗಡಿಭಾಗದಲ್ಲಿ ನಿರ್ಮಿಸಿರುವ ರೈಲು ಕಂಬಿಗಳು ಮುರಿದು ಬಿದ್ದಿವೆ, ಇದರಿಂದ ಕಾಡಾನೆಗಳು ಆಗಾಗ ಗ್ರಾಮಗಳಿಗೆ ನುಗ್ಗುತ್ತಿವೆ, ಅಲ್ಲದೆ ರೈತರು ಬೆಳೆದ ಬೆಳೆ ನಾಶ ಮಾಡುತ್ತವೆ. ಇದರಿಂದ ಗಾಮೀಣರು ಭಯಭೀತರಾಗಿದ್ದಾರೆ. ಕೂಡಲೇ ಇದನ್ನು ದುರಸ್ತಿ ಪಡಿಸಿ ಶಾಶ್ವತ ಪರಿಹಾರ ಕಂಡುಕೊಳ್ಳಬೇಕೆಂದು ಅರಣ್ಯ ಇಲಾಖೆ ಅಧಿಕಾರಿಗಳನ್ನು ಒತ್ತಾಯಿಸಿದರು.

ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಟಿ.ಡಿ.ಮಹಾಂತೇಶ್ ಮಾತನಾಡಿ, ಈಗಾಗಲೇ ನರೇಗಾ ಯೋಜನೆಯನ್ನು ಸದ್ಬಳಕೆ ಮಾಡಿಕೊಳ್ಳಲು 2025–26ನೇ ಸಾಲಿಗೆ ವಾರ್ಡ್ ಸಭೆಗಳನ್ನು ನಡೆಸಲಾಗಿದೆ.

ನೋಡಲ್ ಅಧಿಕಾರಿಯಾಗಿ ಶ್ರೀನಿವಾಸ್ ಕರ್ತವ್ಯ ನಿರ್ವಹಿಸಿದರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಮಾಮಣಿ, ಗ್ರಾ.ಪಂ ಅಧ್ಯಕ್ಷ ರೇಣುಕಪ್ಪ, ಉಪಾಧ್ಯಕ್ಷೆ ಗಿರಿಜಮ್ಮ, ಎಸ್.ಡಿ.ಎ ಸುರೇಶ್‌ಚಂದ್ರ, ಕರವಸೂಲಿಗಾರ ವೈರಮುಡಿ, ಸದಸ್ಯರಾದ ಮುನಿಯಯ್ಯ, ಶಿವಸಿದ್ದೇಗೌಡ, ಪ್ರಶಾಂತ್‌ಕುಮಾರ್, ಮಮತ, ಕಮಲಮ್ಮ, ಸೋಮಶೇಖರ್ ಮೊದಲಾದವರಿದ್ದರು.

ಸಮಗ್ರ ಅಭಿವೃದ್ಧಿಯ ಹರಿಕಾರ ಎಸ್.ಎಂ.ಕೃಷ್ಣ

ಸಂಕ.ಸಮಾಚಾರ, ರಾಮನಗರ

ಸಮಗ್ರ ಅಭಿವೃದ್ಧಿಯ ಹರಿಕಾರ. ಇಡೀ ದೇಶವೇ ಮೆಚ್ಚುವ ರಾಜಕಾರಣಿ ಎಸ್.ಎಂ.ಕೃಷ್ಣ ಎಂದು ಸಾಹಿತಿ ಡಾ.ಎಂ.ಬೈರೇಗೌಡ ಶ್ಲಾಘಿಸಿದರು.

ನಗರದ ಜಿಲ್ಲಾ ಕಸಾಪ ಕಚೇರಿಯಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡಿದ್ದ ಇತ್ತೀಚೆಗೆ ನಿಧನರಾದ ಮಾಜಿ ಮುಖ್ಯಮಂತ್ರಿ ಮಾಜಿ ಕೇಂದ್ರಸಚಿವ ಹಾಗೂ ಮಾಜಿ ರಾಜ್ಯಪಾಲರಾದ ಎಸ್.ಎಂ.ಕೃಷ್ಣ ನುಡಿನಮನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಹಲವು ತೊಂದರೆ ತೊಡಕುಗಳನ್ನು ನಿವಾರಿಸಿಕೊಂಡು ದಿಟ್ಟತನದ ಆಡಳಿತ ನೀಡಿದ ಸಜ್ಜನ ರಾಜಕಾರಣಿಗಳಲ್ಲಿ ಅಗ್ರಗಣ್ಯರು. ಕನ್ನಡ, ಇಂಗ್ಲಿಷ್ ಭಾಷೆ, ನಗು ಮೊಗ, ಉತ್ತಮ ವಸ್ತ್ರಗಳನ್ನು ಧರಿಸುವುದು ಇವೆಲ್ಲವೂ ಅವರ ವ್ಯಕ್ತಿತ್ವದ ಭಾಗವಾಗಿದ್ದವು ಎಂದರು.

ಬರಗಾಲ, ವರನಟ ರಾಜಕುಮಾರ್ ಅವರ ಅಪಹರಣ ಇತ್ಯಾದಿ ಸವಾಲುಗಳನ್ನು ಎದುರಿಸಿದ ರೀತಿ ಗಮನಾರ್ಹ ಹಾಗೂ ಬಿಸಿಯೂಟದ ಯೋಜನೆ, ಸ್ತ್ರೀಶಕ್ತಿ ಸಂಘದ ಸ್ಥಾಪನೆ ಸೇರಿದಂತೆ ಹತ್ತು ಹಲವು ಕಾರ್ಯಕ್ರಮಗಳನ್ನು ಜಾರಿಗೆ ತಂದಿರುವ ಹರಿಕಾರ ಎಂದು ನುಡಿದರು.

ನಿವೃತ್ತ ಪ್ರಾಂಶುಪಾಲರ ಸಂಘದ ಅಧ್ಯಕ್ಷ ವನರಾಜ್, ತಾ.ಕಸಾಪ ಅಧ್ಯಕ್ಷ ಬಿ.ಟಿ.ದಿನೇಶ್ ಬಿಳಗುಂಬ, ಜಿಲ್ಲಾ ಕಸಾಪ ಅಧ್ಯಕ್ಷ ಬಿ.ಟಿ. ನಾಗೇಶ್, ಚಕ್ರಬಾವಿ ಸುರೇಶ್, ಕವಿ ಕಿರಣ್ ರಾಜ್ ತುಂಬೇನಹಳ್ಳಿ, ಕಿರಣ್, ನಂಜುಂಡಿ, ನಿವೃತ್ತ ಪ್